# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1325 |
| ಮಾನ್ಯ ಸದಸ್ಯರ ಹೆಸರು | ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24.12.2021 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು. |

| ಪ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಾರವಾರ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್ ನೌಕರರ ವೇತನದ ಮೊತ್ತವಾದ ರೂ.12.5 ಲಕ್ಷಗಳನ್ನು ಸಂಬಂಧಪಟ್ಟ ಅಧಿಕಾರಿಗಳು ವಂಚಿಸಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಬಂದಿದೆ |
| ಆ | ಈ ವಿಷಯದ ಬಗ್ಗೆ ಈಗಾಗಲೇ ಜಿಲ್ಲಾ ಮಟ್ಟದ ಅಧಿಕಾರಿಯವರಿಂದ ತನಿಖೆ ಪ್ರಾರಂಭವಾಗಿದ್ದು, ಈ ಬಗ್ಗೆ ಸದರಿ ಅಧಿಕಾರಿಗಳು ಮಾಡಿರುವ ತನಿಖೆಯ ವಿವರಗಳೇನು ; (ಮಾಹಿತಿ ನೀಡುವುದು) | ಉತ್ತರಕನ್ನಡ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿನ ಹೊರಗುತ್ತಿಗೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಡುಗೆಯವರು/ಅಡುಗೆ ಸಹಾಯಕರು/ಕಾವಲು ಗಾರರು ಇವರ ವೇತನವನ್ನು ಡ್ರಾ ಮಾಡಿಕೊಂಡು ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಜಿಲ್ಲೆ ಇವರು ವಿಚಾರಣೆ ನಡೆಸಲು 3 ಜನ ಸದಸ್ಯರನ್ನೊಳಗೊಂಡ ಜಿಲ್ಲಾ ಮಟ್ಟದ ತನಿಖಾ ಸಮಿತಿಯನ್ನು ರಚನೆ ಮಾಡಿರುತ್ತಾರೆ. ಸದರಿ ತನಿಖಾ ತಂಡವು ನೀಡಿರುವ ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಜಿಲ್ಲೆರವರು ಇತ್ತೀಚೆಗೆ ಸಲ್ಲಿಸಿರುತ್ತಾರೆ.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಜಿಲ್ಲೆ ರವರು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಪ್ರಮುಖ ಅಂಶಗಳು ಈ ಕೆಳಕಂಡಂತಿರುತ್ತವೆ.<br><br>➢ ಕಛೇರಿ ಕಾರ್ಯವಿಧಾನವನ್ನು ಅನುಸರಿಸದೇ ಇರುವುದು. |